SRI DEVARAJ URS ACADEMY OF HIGHER EDUCATION & RESEARCH

SRI DEVARAJ URS MEDICAL COLLEGE

Tamaka, Kolar

UNIVERSITY LIBRARY & LEARNING RESOURCE CENTRE

Online Newspaper Clipping Service

**Dtd-Monday, 01st, January- 2018**

ವಿಜಯ ಕರ್ನಾಟಕ

**Pg.No.06**

# ಜ. 2 ದೇಶಾದ್ಯಂತ ಖಾಸಗಿ ಆಸ್ಪತ್ರೆಗಳ ಹೊರ ರೋಗಿಗಳ ಸೇವೆ ಸ್ಥಗಿತ ಸಾಧ್ಯತೆ

**ವಿಕ ಸುದ್ದಿಲೋಕ** ಬೆಂಗಳೂರು

ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ತಿದ್ದುಪಡಿ ವಿಧೇಯಕ ವಿರೋಧಿಸಿ ಪ್ರತಿಭಟನೆಗಿಳಿದಿದ್ದ ಖಾಸಗಿ ವೈದ್ಯರು, ಇದೀಗ ರಾಷ್ಟ್ರೀಯ ವೈದ್ಯಕೀಯ ಆಯೋಗ (ಎನ್‌ಎಂಸಿ) ರಚನೆಗೆ ಮುಂದಾಗಿರುವ ಕೇಂದ್ರ ಸರಕಾರದ ಕ್ರಮ ಖಂಡಿಸಿ ಜ. 2ರಂದು ದೇಶಾದ್ಯಂತ ಎಲ್ಲಾ ಖಾಸಗಿ ಆಸ್ಪತ್ರೆಗಳ ಹೊರ ರೋಗಿಗಳ ಸೇವೆಯನ್ನು ಸ್ಥಗಿತಗೊಳಿಸಲು ಮುಂದಾಗಿದ್ದಾರೆ.

ಭಾರತೀಯ ವೈದ್ಯಕೀಯ ಪರಿಷತ್ (ಎಂಸಿಐ) ಮುಚ್ಚಿ ರಾಷ್ಟ್ರೀಯ ವೈದ್ಯಕೀಯ ಆಯೋಗ (ಎನ್‌ಎಂಸಿ) ಸ್ಥಾಪಿಸುವ ಬದಲು ಪರಿಷತ್ತನ್ನೇ ಬಲಪಡಿಸಬೇಕು. ಪರಿಷತ್ತಿನಲ್ಲಿರುವ ಕಾನೂನುಗಳನ್ನೇ ಆಯೋಗದಲ್ಲಿ ಅಳವಡಿಸಬೇಕು. ಎಕ್ಸಿಟ್ ಪರೀಕ್ಷೆ ಕೈಬಿಡಬೇಕು, ಚುನಾಯಿತ ಪ್ರತಿನಿಧಿಗಳ ಸಂಖ್ಯೆಯನ್ನು ಹೆಚ್ಚಿಸಬೇಕು. ಬ್ರಿಜ್ ಕೋರ್ಸ್ ಮಾಡಿದವರನ್ನು ಆಯೋಗದ ವ್ಯಾಪ್ತಿಗೆ ತರಬಾರದು ಎಂದು ಅವರು ಭಾರತೀಯ ವೈದ್ಯ ಸಂಘ ಆಗ್ರಹಿಸಿದೆ.

"ನೀತಿ ಆಯೋಗದ ಸಲಹೆ ಮೇರೆಗೆ ರಾಷ್ಟ್ರೀಯ ವೈದ್ಯಕೀಯ ಆಯೋಗ ಸ್ಥಾಪನೆ ಸಂಬಂಧ ಕೇಂದ್ರ ಆರೋಗ್ಯ ಇಲಾಖೆ ಕರಡು ಮಸೂದೆ ಸಿದ್ಧಪಡಿಸಿದೆ. ಅದನ್ನು ಡಿ.29ರಂದು ಲೋಕಸಭೆಯಲ್ಲಿ ಮಂಡಿಸಲಾಗಿದ್ದು, ಜ. 2ರಂದು ಚರ್ಚೆಗೆ ಬರಲಿದೆ. ಹೀಗಾಗಿ ಹೊಸ ವಿಧೇಯಕದಲ್ಲಿ ಸೂಕ್ತ ತಿದ್ದುಪಡಿ ತರುವ ಕುರಿತು ಜ. 1ರಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರಿಗೆ ಮನವಿ ಸಲ್ಲಿಸಲಾಗುವುದು. ಸೂಕ್ತ ಸ್ಪಂದನೆ ಸಿಗದಿದ್ದರೆ ಜ. 2ರಂದು ದೇಶಾದ್ಯಂತ ಸಾಂಕೇತಿಕವಾಗಿ ಖಾಸಗಿ ಆಸ್ಪತ್ರೆಗಳಲ್ಲಿ ಹೊರ ರೋಗಿಗಳ ಸೇವೆಯನ್ನು ಸ್ಥಗಿತಗೊಳಿಸಲಾಗುವುದು" ಎಂದು ಭಾರತೀಯ ವೈದ್ಯ ಸಂಘದ ಕರ್ನಾಟಕ ಶಾಖೆಯ ಅಧ್ಯಕ್ಷ ಡಾ. ಎಚ್.ಎನ್. ರವೀಂದ್ರ ತಿಳಿಸಿದ್ದಾರೆ.

ಉದಯವಾಣಿ



# ವೈದ್ಯಕೀಯ ಆಯೋಗ ವಿರೋಧಿಸಿ ಮುಷ್ಕರ?

**ಬೆಂಗಳೂರು:** ಕೇಂದ್ರ ಸರ್ಕಾರದ ಉದ್ದೇಶಿತ 'ರಾಷ್ಟ್ರೀಯ ವೈದ್ಯಕೀಯ ಆಯೋಗ' ರಚನೆಗೆ ವಿರೋಧ ವ್ಯಕ್ತಪಡಿಸಿರುವ ಭಾರತೀಯ ವೈದ್ಯ ಪರಿಷತ್ (ಎಂಸಿಐ), ಸೋಮವಾರ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರೊಂದಿಗೆ ಸಭೆ ನಡೆಸಲಿದೆ. ಒಂದೊಮ್ಮೆ ಮಾತುಕತೆ ವಿಫಲವಾದರೆ ಜ.2ರಿಂದ ದೇಶಾದ್ಯಂತ ಆಸ್ಪತ್ರೆಗಳಲ್ಲಿ 'ಹೊರರೋಗಿ ವಿಭಾಗ'ದ ಸೇವೆ ಸ್ಥಗಿತಗೊಳಿಸಲು ನಿರ್ಧರಿಸಿದೆ. ದೆಹಲಿಯಲ್ಲಿ ಭಾನುವಾರ ನಡೆದ ಭಾರತೀಯ ವೈದ್ಯ ಪರಿಷತ್‌ನ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಈ ತೀರ್ಮಾನ ತೆಗೆದುಕೊಳ್ಳಲಾಗಿದೆ. ಸಚಿವರೊಂದಿಗಿನ ಸಭೆ ವಿಫಲವಾದರೆ ಪ್ರತಿಭಟನೆ ನಡೆಸಲು ವೈದ್ಯರು ತೀರ್ಮಾನಿಸಿದ್ದಾರೆ. ಇದರಿಂದ ಜ.2ರಂದು ಆರೋಗ್ಯ ಸೇವೆಗಳು ದುರ್ಲಭವಾಗಲಿವೆ. ಈ ಹಿನ್ನೆಲೆಯಲ್ಲಿ ಸೋಮವಾರ ಎಲ್ಲ ಘಟಕಗಳ ಮಟ್ಟದಲ್ಲಿ ಪತ್ರಿಕಾಗೋಷ್ಠಿಗಳನ್ನು ನಡೆಸಬೇಕು. ಎಲ್ಲ ವೈದ್ಯರು ಹಾಗೂ ವೈದ್ಯಕೀಯ ವಿದ್ಯಾರ್ಥಿಗಳು ಒಂದು ಕಡೆ ಸೇರಿ ಮೆರವಣಿಗೆಯಲ್ಲಿ ಸಾಗಿ ಡೀಸಿ ಮೂಲಕ ಪ್ರಧಾನಿಯವರಿಗೆ ಮನವಿ ಪತ್ರ ಸಲ್ಲಿಸಬೇಕು. ಸಮಸ್ಯೆ ತಾರ್ಕಿಕ ಅಂತ್ಯ ಕಾಣುವವರೆಗೆ ಹೋರಾಟ ನಡೆಸಬೇಕೆಂಬ ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಎಂಸಿಐ ಕಾರ್ಯಕಾರಿ ಸದಸ್ಯ ಡಾ. ಎಚ್.ಎನ್ ರವೀಂದ್ರ ತಿಳಿಸಿದ್ದಾರೆ.